ವಿ-72-(26)

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ, ಇವರು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

***

**ಪ್ರಶ್ನೆ:** ಹೊಸ ಶಿಕ್ಷಣ ನೀತಿ ತರುವಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಡಿಪ್ಲೊಮಾ ಕೋರ್ಸುಗಳಲ್ಲಿ ಅಪ್ಲೈಡ್ ಸೈನ್ಸ್ ಮತ್ತು ಅಪ್ಲೈಡ್ ಸೈನ್ಸ್ ಲ್ಯಾಬ್‌ಗಳನ್ನು ಸಿ-20 ಪಠ್ಯಕ್ರಮದಲ್ಲಿ ಕೈಬಿಡಲು ಉದ್ದೇಶಿಸಿರುವುದರಿಂದ ವಿದ್ಯಾರ್ಥಿಗಳಿಗೆ ಹಾಗೂ ಬೋಧಕರಿಗೆ ತುಂಬಾ ತೊಂದರೆ ಉಂಟಾಗುತ್ತದೆ ಮತ್ತು ಎ.ಐ.ಸಿ.ಟಿ.ಇ ನಿಯಮಗಳಿಗೆ ವಿರುದ್ಧವಾಗಿದೆ ಎಂಬ ವಿಷಯದ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರ ಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮ ಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

1. 2020-21 ನೇ ಶೈಕ್ಷಣಿಕ ಸಾಲಿನಿಂದ ತಾಂತ್ರಿಕ ಶಿಕ್ಷಣ ಇಲಾಖೆಯ ಡಿಪ್ಲೊಮಾ ಕೋರ್ಸುಗಳಿಗೆ ಪರಿಷ್ಕೃತ ಪಠ್ಯಕ್ರಮಗಳನ್ನು ಹೊಸ ರಾಷ್ಟ್ರೀಯ ಶಿಕ್ಷಣ ನೀತಿ ಅನ್ವಯ ಅಳವಡಿಸಲು ಉದ್ದೇಶಿಸಲಾಗಿದೆ. ಪರಿಷ್ಕೃತ ಹೊಸ ಡಿಪ್ಲೊಮಾ ಪಠ್ಯಕ್ರಮಗಳನ್ನು ವಿವಿಧ ಕೈಗಾರಿಕಾ / ತಾಂತ್ರಿಕ / ಶೈಕ್ಷಣಿಕ ಮತ್ತು ರಾಷ್ಟ್ರೀಯ ತಾಂತ್ರಿಕ ಶಿಕ್ಷಕರ ತರಬೇತಿ ಮತ್ತು ಸಂಶೋಧನಾ ಸಂಸ್ಥೆಯ ಪರಿಣಿತರ ಅಭಿಪ್ರಾಯಗಳನ್ನು ಪಡೆದು ಹೆಚ್ಚಿನ ಕೌಶಲ್ಯ ಹಾಗು ಉದ್ಯೋಗದಾತತೆ (Employability) ವೃದ್ಧಿಸಲು ರೂಪಿಸಲಾಗಿದೆ.

2. ಸಿ-20 ಪರಿಷ್ಕೃತ ಡಿಪ್ಲೊಮಾ ಪಠ್ಯಕ್ರಮಗಳಲ್ಲಿ ಅಪ್ಲೈಡ್ ಸೈನ್ಸ್ ಮತ್ತು ಅಪ್ಲೈಡ್ ಸೈನ್ಸ್ ಲ್ಯಾಬ್‌ಗಳಲ್ಲಿರುವ ಪಠ್ಯದ ವಿಷಯಗಳನ್ನು ದ್ವಿತೀಯ ವರ್ಷದ ಡಿಪ್ಲೊಮಾ ಕೋರ್ಸುಗಳ ವಿವಿಧ ತಾಂತ್ರಿಕ ವಿಷಯಗಳಲ್ಲಿ ಅಳವಡಿಸುವುದು ಸೂಕ್ತ ಹಾಗು ವಿದ್ಯಾರ್ಥಿಗಳ ಕೌಶಲ್ಯಾಭಿವೃದ್ಧಿಗೆ ಪೂರಕವಾಗಿರುತ್ತದೆ. ಆದ್ದರಿಂದ ಅಪ್ಲೈಡ್ ಸೈನ್ಸ್ ಮತ್ತು ಅಪ್ಲೈಡ್ ಸೈನ್ಸ್ ಲ್ಯಾಬ್‌ಗಳ ಪಠ್ಯವಿಷಯಗಳನ್ನು ಸಿ-20 ಪಠ್ಯಕ್ರಮದಲ್ಲಿ ದ್ವಿತೀಯ ಮತ್ತು ತೃತೀಯ ವರ್ಷದಲ್ಲಿ ಬೋಧಿಸಲಾಗುವುದು.

3. ಸಿ-20 ಪರಿಷ್ಕೃತ ಡಿಪ್ಲೊಮಾ ಪಠ್ಯಕ್ರಮಗಳು ವಿದ್ಯಾರ್ಥಿಗಳಿಗೆ ಕೌಶಲ್ಯ ಮತ್ತು ಉದ್ಯೋಗದಾತತೆ ಹೆಚ್ಚಿಸುವುದರಿಂದ ವಿದ್ಯಾರ್ಥಿಗಳಿಗೆ ವಿಫುಲ ಉದ್ಯೋಗಾವಕಾಶಗಳು ಲಭಿಸಲಿವೆ. ಅಪ್ಲೈಡ್ ಸೈನ್ಸ್ ಮತ್ತು ಅಪ್ಲೈಡ್ ಸೈನ್ಸ್ ಲ್ಯಾಬ್‌ಗಳನ್ನು ಬೋಧಿಸುವ ಬೋಧಕರಿಗೆ ಗಣಿತ, ಸಂಖ್ಯಾಶಾಸ್ತ್ರ, ಪರಿಸರ ವಿಜ್ಞಾನ ಹಾಗು ಪ್ರಾಜೆಕ್ಟ್ ಮ್ಯಾನೇಜ್‌ಮೆಂಟ್ ಸ್ಕಿಲ್ಸ್ ವಿಷಯಗಳನ್ನು ನೀಡಿದ್ದು, ಸದರಿ ವಿಷಯಗಳಲ್ಲಿ ಪರಿಣಿತರಿಂದ ತರಬೇತಿ ನೀಡಿ, ಬೋಧನೆ ಮಾಡಲು ಅವಕಾಶ ಕಲ್ಪಿಸುವುದರಿಂದ ಯಾವುದೇ ರೀತಿ ತೊಂದರೆ ಉಂಟಾಗುವುದಿಲ್ಲ.

4. ಸಿ-20 ಪರಿಷ್ಕೃತ ಡಿಪ್ಲೊಮಾ ಪಠ್ಯಕ್ರಮಗಳನ್ನು ಎ.ಐ.ಸಿ.ಟಿ.ಇ ನಿಗಧಿಪಡಿಸಿರುವ ಶೈಕ್ಷಣಿಕ ನಿಯಮಾವಳಿಗಳಾದ ಕ್ರೆಡಿಟ್, ಇಂಟರ್ನಶಿಪ್, ಪ್ರಾಜೆಕ್ಟ್ ಹಾಗು ಇಂಡಕ್ಷನ್ ಪ್ರೋಗ್ರಾಂಗಳ ಅಡಿ ರೂಪಿಸಲಾಗಿರುವುದರಿಂದ ಎ.ಐ.ಸಿ.ಟಿ.ಇ ನಿಯಮಾವಳಿಗಳಿಗೆ ವಿರುದ್ಧವಾಗಿರುವುದಿಲ್ಲ.

**ಇಡಿ 137 ಟಿಪಿಇ 2020**

(ಡಾ॥ ಅಶ್ವತ್ಥನಾರಾಯಣ.ಸಿ.ಎನ್)
ಉಪ ಮುಖ್ಯಮಂತ್ರಿಗಳು
(ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ,
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ)